ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ.
ಉನ್ನತ ಶಿಕ್ಷಣ ಸೌಧ.
ಶೇಷಾದ್ರಿ ರಸ್ತೆ. ಬೆಂಗಳೂರು.

ಸಂಖ್ಯೆ: ಕಾಶಿಇ/ಶೈವಿ/10/ಸುತ್ತೋಲೆ/2021-22 ದಿನಾಂಕಃ 18.11.2021.

## ಸುತ್ತೋಲೆ

ವಿಷಯಃ ಸ್ವಾತಂತ್ರೋತ್ಸವದ ಅಮೃತ ಮಹೋತ್ಸವದ ಅಂಗವಾಗಿ ಅಮೃತ ಸಮುದಾಯ ಅಭಿವೃದ್ಧಿ ಯೋಜನೆಗೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಹಮ್ಮಿಕೊಳ್ಳುವ ಕುರಿತು.

ಉಲ್ಲೇಖಃ
1. ಸರ್ಕಾರದ ಅರೆ ಸರ್ಕಾರಿ ಪತ್ರ ಸಂಖ್ಯೆ:ಯುಸೇಇ/ರಾಸೇಯೋ/12/2021-22 ದಿನಾಂಕ:27.10.2021.
2. ಸರ್ಕಾರದ ಪತ್ರ ಸಂಖ್ಯೆ:ಇಡಿ 300 ಯುಎನ್ಇ 2021 ಬೆಂಗಳೂರು ದಿನಾಂಕ:08.11.2021.

********

ಸ್ವಾತಂತ್ರೋತ್ಸವದ ಅಮೃತ ಮಹೋತ್ಸವದ ಅಂಗವಾಗಿ ಮಾನ್ಯ ಮುಖ್ಯ ಮಂತ್ರಿಯವರು ಅಮೃತ ಸಮುದಾಯ ಅಭಿವೃದ್ಧಿ ಯೋಜನೆಯನ್ನು ಘೋಷಣೆ ಮಾಡಿದ್ದು, ಈ ಯೋಜನೆಯ ಸಮಗ್ರ ಅನುಷ್ಟಾನಕ್ಕಾಗಿ, 2021-22ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ:ಯುಸೇಇ/ರಾಸೇಯೋ /40/2021-22/10 ಬೆಂಗಳೂರು, ದಿನಾಂಕ:26.10.2021ರ ಮೂಲಕ ರಾಜ್ಯ ಎನ್ಎಸ್ಎಸ್ ಕೋಶವು ವಾರ್ಷಿಕ ವಿಶೇಷ ಶಿಬಿರಕ್ಕೆ ಪ್ರತಿ ವಿಶ್ವವಿದ್ಯಾನಿಲಯಕ್ಕೆ ರೂ.22,500/-ಗಳ ಅನುದಾನವನ್ನು ಬಿಡುಗಡೆ ಮಾಡಿದ್ದು, ಸದರಿ ಅನುದಾನವನ್ನು ಬಳಸಿಕೊಂಡು ಏಳು ದಿನಗಳ ವಿಶೇಷ ಶಿಬಿರವನ್ನು ಕಡ್ಡಾಯವಾಗಿ ದತ್ತು ಪಡೆದ ಗ್ರಾಮಗಳಲ್ಲಿ ಆಯೋಜಿಸಿ, App ಮೂಲಕ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಿ ಗ್ರಾಮವಾರು ಸಮಗ್ರ ವರದಿಯನ್ನು ದಿನಾಂಕ:25.11.2021 ರ ಒಳಗಾಗಿ ರಾಜ್ಯ ಎನ್ಎಸ್ಎಸ್ ಕೋಶಕ್ಕೆ ಸಲ್ಲಿಸಲು ಹಾಗೂ 2021-22ನೇ ಸಾಲಿನ ದೈನಂದಿನ ಚಟುವಟಿಕೆಗಳ ಆಯೋಜನೆಗೆ ಬಿಡುಗಡೆಯಾಗಿರುವ ರೂ.25,000/- ಅನುದಾನದಲ್ಲಿ ರೂ.16,000/-ಗಳ ಅನುದಾನವನ್ನು ಬಳಸಿಕೊಂಡು, ಗ್ರಾಮಗಳಲ್ಲಿ ಪ್ರತಿ ಶನಿವಾರ ಅಮೃತ ಸಮುದಾಯ ಅಭಿವೃದ್ಧಿ ಯೋಜನೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಹಮ್ಮಿಕೊಳ್ಳಲು ಉಲ್ಲೇಖಿತ ಸರ್ಕಾರದ ಪತ್ರಗಳಲ್ಲಿ ಸೂಚಿಸಲಾಗಿದೆ.

ತತ್ಸಂಬಂಧವಾಗಿ ಈ ವಿಷಯವನ್ನು "ಅತೀ ತುರ್ತು ಎಂದು ಪರಿಗಣಿಸಿ" ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯ ಅನುಷ್ಟಾನಕ್ಕಾಗಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ಸಂಬಂಧಿಸಿದ ವಿಶ್ವವಿದ್ಯಾನಿಲಯಗಳೊಂದಿಗೆ ಸಮನ್ವಯ ಸಾಧಿಸಿ 2021-22ನೇ ಸಾಲಿನ ದೈನಂದಿನ ಚಟುವಟಿಕೆಗಳ

ಆಯೋಜನೆಗೆ ವಿಶ್ವವಿದ್ಯಾಲಯಗಳಿಗೆ ಬಿಡುಗಡೆಯಾಗಿರುವ ರೂ.25.000/-ಗಳ ಅನುದಾನದಲ್ಲಿ ರೂ.16.000/-ಗಳ ಅನುದಾನವನ್ನು ಬಳಸಿಕೊಂಡು ಗ್ರಾಮಗಳಲ್ಲಿ ಪ್ರತಿ ಶನಿವಾರ ಅಮೃತ ಸಮುದಾನ ಅಭಿವೃದ್ಧಿ ಯೋಜನೆಗೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಹಮ್ಮಿಕೊಳ್ಳುವಂತೆ ಹಾಗೂ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಮಾಹಿತಿಯನ್ನು ನೇರವಾಗಿ ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

<u>ಇವರಿಗೆ:</u>

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

<u>ಪ್ರತಿಯನ್ನು:</u>

1. ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ). ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1) ಕರ್ನಾಟಕ ಸರ್ಕಾರದ ಸಚಿವಾಲಯ. ವಿಧಾನಸೌಧ. ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಶಾಖೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ. 2ನೇ ಮಹಡಿ. 2ನೇ ಹಂತ. ಬಹುಮಹಡಿಗಳ ಕಟ್ಟಡ. ಬೆಂಗಳೂರು-01.
3. ಜಂಟಿ ನಿರ್ದೇಶಕರು. ಕಾಲೇಜು ಶಿಕ್ಷಣ ಇಲಾಖೆ. ಪ್ರಾದೇಶಿಕ ಕಛೇರಿ. ಬೆಂಗಳೂರು. ಮೈಸೂರು. ಶಿವಮೊಗ್ಗ. ಮಂಗಳೂರು. ಧಾರವಾಡ. ಕಲಬುರಗಿ.
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು. ಮಾಹಿತಿ ತಂತ್ರಜ್ಞಾನ ವಿಭಾಗ. ಕೇಂದ್ರ ಕಛೇರಿ. ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
5. ಕಛೇರಿ ಪ್ರತಿ.